# ಕರ್ನಾಟಕ ಸರ್ಕಾರ
## ಉನ್ನತ ಶಿಕ್ಷಣ ಇಲಾಖೆ
### ಬಹುಮಹಡಿಗಳ ಕಟ್ಟಡ, ಬೆಂಗಳೂರು

ಸಂಖ್ಯೆ: ಇಡಿ/12/ಕೆವಿವಿ/2026 ದಿನಾಂಕ: 06.05.2026.

**ಸಾರ್ವಜನಿಕ ಪ್ರಕಟಣೆ**

**ಕನ್ನಡ ವಿಶ್ವವಿದ್ಯಾಲಯದ ಕುಲಪತಿಯ ಹುದ್ದೆಯ ನೇಮಕಾತಿ**

1. ಹಂಪಿಯಲ್ಲಿರುವ ಕನ್ನಡ ವಿಶ್ವವಿದ್ಯಾಲಯದ ಕುಲಪತಿಯ ಹುದ್ದೆಗೆ ಕನ್ನಡ ವಿಶ್ವವಿದ್ಯಾಲಯಗಳ ಅಧಿನಿಯಮ 1991 ರ ಪ್ರಕರಣ 13(2) ರ ಉಪಬಂಧಗಳನುಸಾರ ನೇಮಕಾತಿ ಮಾಡಲು ಈ ಕೆಳಕಂಡ ಅರ್ಹತೆಯುಳ್ಳ ಪ್ರಾಧ್ಯಾಪಕರು/ಶಿಕ್ಷಣ ತಜ್ಞರುಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

i. ಉನ್ನತ ಮಟ್ಟದ ಆಡಳಿತ, ಶೈಕ್ಷಣಿಕ ಹಾಗೂ ಸಂಶೋಧನಾ ಸಾಮರ್ಥ್ಯ, ಪ್ರಾಮಾಣಿಕತೆ, ಸಮಗ್ರತೆ / ಋಜುತ್ವ ನೈತಿಕ ಮೌಲ್ಯಗಳನ್ನು ಹಾಗೂ ಸಾಂಸ್ಥಿಕ ಬದ್ಧತೆಯನ್ನು ಹೊಂದಿರತಕ್ಕದ್ದು;.

ii. ಕನ್ನಡ ವಿಶ್ವವಿದ್ಯಾಲಯದ ಕುಲಪತಿಯು ಕನ್ನಡ ವಿಶ್ವವಿದ್ಯಾಲಯ ಅಧಿನಿಯಮ 1991 ರ ಪ್ರಕರಣ 13(3) ರಲ್ಲಿ ನಿಯಮಿಸಿರುವಂತೆ, 03 ವರ್ಷಗಳು ಅವಧಿಯವರೆಗೆ ಪದಧಾರಣ ಮಾಡತಕ್ಕದ್ದು ಮತ್ತು ಮೂರು ವರ್ಷಗಳ ಹೆಚ್ಚಿನ ಅವಧಿಯವರೆಗೆ ಪುನ: ನೇಮಕಗೊಳ್ಳಲು ಅರ್ಹರಾಗಿರತಕ್ಕದ್ದು:

ಪರಂತು, ಯಾವೊಬ್ಬ ವ್ಯಕ್ತಿಯು ಒಟ್ಟು ಆರು ವರ್ಷಗಳಿಗಿಂತ ಹೆಚ್ಚಾಗಿ ಕುಲಪತಿಯವರ ಹುದ್ದೆಯನ್ನು ಧಾರಣ ಮಾಡತಕ್ಕದ್ದಲ್ಲ.

2. ಹಂಪಿಯಲ್ಲಿರುವ ಕನ್ನಡ ವಿಶ್ವವಿದ್ಯಾಲಯದ ಕುಲಪತಿಯ ಹುದ್ದೆಗೆ ನೇಮಕಾತಿಗೆ ಉಮೇದುವಾರಿಕೆ ಸಲ್ಲಿಸ ಬಯಸುವ ಆಸಕ್ತರು ತಮ್ಮ ವಿದ್ಯಾರ್ಹತೆ, ಸಂಶೋಧನೆ, ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಅನುಭವಗಳು, ಸಾಧನೆಗಳು ಹಾಗೂ ಇತರೆ ವಿವರಗಳನ್ನು ಯುಜಿಸಿಯಿಂದ ನಿಗದಿಪಡಿಸಲಾಗಿರುವ ನಮೂನೆಯಲ್ಲಿ ಭರ್ತಿ ಮಾಡಿ ಮುದ್ರಿತ ಅರ್ಜಿಗಳನ್ನು ತ್ರಿಪ್ರತಿಗಳಲ್ಲಿ ಈ ನೇಮಕಾತಿ ಜಾಹೀರಾತು ಪ್ರಕಟಣೆಯಾದ 20 ದಿನಗಳ ಒಳಗಾಗಿ (ಸಾರ್ವತ್ರಿಕ ರಜಾ ದಿನಗಳನ್ನು ಒಳಗೊಂಡಂತೆ) ಸ್ವೀಕೃತವಾಗುವಂತೆ **"ಸರ್ಕಾರದ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, 6ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು - 560 001"** ಇವರಿಗೆ ಸಲ್ಲಿಸತಕ್ಕದ್ದು. ಅರ್ಜಿ ನಮೂನೆಯನ್ನು ಒಳಗೊಂಡಿರುವ ಲಕೋಟೆಯ ಮೇಲೆ **"ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಹುದ್ದೆಗೆ ಅರ್ಜಿ"** ಎಂದು ಬರೆಯತಕ್ಕದ್ದು. (PDF) ರೂಪದ ವಿದ್ಯುನ್ಮಾನ ಅರ್ಜಿಗಳನ್ನು ಏಕ ಪ್ರತಿಯಲ್ಲಿ e-mail: **kannadaunivc2026@gmail.com** ಗೆ ನಿಗದಿತ ಅವಧಿಯೊಳಗೆ ಕಳುಹಿಸತಕ್ಕದ್ದು.

3. ಪ್ರಸ್ತುತ ಸೇವೆಯಲ್ಲಿರುವ ವ್ಯಕ್ತಿಗಳು ಅವರ ವಿರುದ್ಧ ಇಲಾಖಾ/ಕ್ರಿಮಿನಲ್ ವಿಚಾರಣೆಗಳು ಬಾಕಿ ಇರದ/ಹೂಡಲು ಉದ್ದೇಶಿಸಿರದ ಮತ್ತು ಈ ಹಿಂದೆ ವಿಚಾರಣೆಗಳನ್ನು ನಡೆಸಿ ದಂಡನೆ ವಿಧಿಸಲಾಗಿರದ ಬಗ್ಗೆ, ಹಾಗೂ ಕಳಂಕಿತ ಸೇವಾ ಚರಿತ್ರೆ ಹಾಗೂ ನೇಮಕಾತಿ ವಿವಾದಗಳನ್ನು ಹೊಂದಿರದ ಬಗ್ಗೆ ಅವರು ಸೇವೆ ಸಲ್ಲಿಸುತ್ತಿರುವ ಸಂಸ್ಥೆಯ ಮುಖ್ಯಸ್ಥರಿಂದ ದೃಢೀಕರಿಸಿ ಪ್ರಮಾಣ ಪತ್ರಗಳನ್ನು ಹಾಗೂ ಸೇವೆಯಿಂದ ವಯೋನಿವೃತ್ತಿ ಹೊಂದಿರುವವರು ಈ ಕುರಿತಂತೆ ಸ್ವಯಂ ದೃಢೀಕರಣ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು, ಪ್ರಮಾಣ ಪತ್ರಗಳಲ್ಲಿ ತಪ್ಪು ಮಾಹಿತಿ ನೀಡಿರುವುದು ಕಂಡು ಬಂದಲ್ಲಿ ಸಂಬಂಧಿಸಿದವರನ್ನು ಕಠಿಣ ಕ್ರಮಕ್ಕೆ ಗುರಿಪಡಿಸಲಾಗುವುದು. ಈ ರೀತಿಯಲ್ಲಿ ಪ್ರಮಾಣ ಪತ್ರಗಳನ್ನು ಸಲ್ಲಿಸದ ವ್ಯಕ್ತಿಗಳ ಅರ್ಜಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.

4. ಅರ್ಜಿ ಸಲ್ಲಿಸಲು ನಿಗದಿಪಡಿಸಲಾಗಿರುವ ನಮೂನೆ/ಪ್ರಪತ್ರವನ್ನು ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರದ **https://hed.karnataka.gov.in** ಅಧಿಕೃತ ಜಾಲತಾಣ ಹಾಗೂ ವಿಶ್ವವಿದ್ಯಾಲಯದ ಜಾಲತಾಣದಿಂದ ಪಡೆಯಬಹುದು.

5. ಅಪೂರ್ಣ ಮತ್ತು ನಿರ್ದಿಷ್ಟಪಡಿಸಲಾದ ನಮೂನೆ ಪ್ರಪತ್ರದಲ್ಲಿರದ ಹಾಗೂ ನಿಗದಿತ ಅವಧಿ/ಗಡುವು ಮುಕ್ತಾಯವಾದ ನಂತರ ಸ್ವೀಕೃತವಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅಂಚೆ ಅಥವಾ ಇತರೆ ಸ್ವರೂಪದ ವಿಳಂಬಗಳಿಗೆ ಉನ್ನತ ಶಿಕ್ಷಣ ಇಲಾಖೆಯು ಜವಾಬ್ದಾರವಾಗುವುದಿಲ್ಲ.

6. ನೇಮಕಾತಿ ಪ್ರಕ್ರಿಯೆಯಲ್ಲಿ ವಾಮ ಮಾರ್ಗದ ಮೂಲಕ ಅನುಚಿತ ಪ್ರಭಾವ ಬೀರಲು ಪ್ರಯತ್ನಿಸುವ ವ್ಯಕ್ತಿಗಳ ಅಭ್ಯರ್ಥಿತ್ವವನ್ನು ರದ್ದುಗೊಳಿಸಿ, ಅರ್ಜಿಯನ್ನು ತಿರಸ್ಕರಿಸಲಾಗುವುದು.

ಸಹಿ/-
ಸರ್ಕಾರದ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ